# ದೇಶದ ಉತ್ತಮ ಭವಿಷ್ಯ ಹಾಗೂ ಭದ್ರತೆಗಾಗಿ ಬಿಜೆಪಿಗೆ ಬೆಂಬಲಿಸಿ: ಜಗದೀಶ್ ಶೆಟ್ಟರ್



ಬೆಳಗಾವಿ: ದಿನದ 24 ಗಂಟೆ ದೇಶದಲ್ಲಿ ಮೋದಿಯವರು ಕೆಲಸ ಮಾಡಿದ್ದಾರೆ ಹಾಗೂ ಮೋದಿಯವರ ದೂರ ದೃಷ್ಟಿ ದೇಶದ ಚಿತ್ರಣವನ್ನೆ ಬದಲಾವಣೆ ಮಾಡಿದೆ ಹಾಗಾಗಿ ಮತ್ತೊಮ್ಮೆ ಮೋದಿಯವರನ್ನು ಪ್ರಧಾನಿ ಮಾಡಲು ನನ್ನನ್ನು ಗೆಲ್ಲಿಸಬೇಕು ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಮನವಿ ಮಾಡಿದರು.

ನಗರದ ಕೆಎಲ್ ಶೇಷದ್ರಿ ಕಾಲೇಜಿನಲ್ಲಿ ಲೋಕಸಭಾ ಚುನಾವಣೆ ನಿಮಿತ್ಯ ಪ್ರಚಾರ ಸಭೆ ನಡೆಸಿ ಮಾತನಾಡಿದ ಅವರು, ಗುಜರಾತ್ ಮಾಡೆಲ್ ಮ?ಲಕ ಮೋದಿಯವರು ದೇಶದಲ್ಲಿ ಮನೆ ಮಾತಾಗಿದ್ದಾರೆ ಅಂತಹ ವ್ಯಕ್ತಿ 2014 ರಲ್ಲಿ ಪ್ರಧಾನಿ ಆದರು. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಲೋಕಸಭಾ ಚುನಾವಣೆಗೆ ಬಹಳಷ್ಟು ಸ್ಥಾನಮಾನ ಇದೆ. ದೇಶದ ಭದ್ರತೆ, ದೇಶದ ಭವಿಷ್ಯ ನಿರ್ಧಾರ ಮಾಡುವ ಚುನಾವಣೆ ಎಂದರೆ ಅದು ಲೋಕಸಭಾ ಚುನಾವಣೆ, ಮೋದಿಯವರು ತಮ್ಮ ಆಡಳಿತ ಅವಧಿಯಲ್ಲಿ ಒಂದೆ ಒಂದು ಕಪ್ಪು ಚುಕ್ಕೆ ಇಲ್ಲದಂತೆ ಆಡಳಿತ ಮಾಡಿದ್ದಾರೆ. ಭ್ರಷ್ಟಾಚಾರ ರಹಿತ ಆಡಳಿತ ಕೊಟ್ಟಿದ್ದಾರೆ. ಹಿಂದಿನ ಯುಪಿಯ ಸರ್ಕಾರದಲ್ಲಿ 2ಜಿ ಹಗರಣ ಸೇರಿದಂತೆ ಅನೇಕ ಹಗರಣಗಳು ಬೆಳಕಿಗೆ ಬಂದವವು, ಲಕ್ಷಾಂತರ ಕೋಟಿಯ ಹಗರಣಗಳ ತನಿಖೆ ಇಂದು ನಡೆಯುತ್ತಿದೆ. ಆದರೆ 10 ವರ್ಷದ ಆಡಳಿತದಲ್ಲಿ ಮೋದಿಯವರು ಒಂದೆ ಒಂದು ಭ್ರಷ್ಟಾಚಾರ ಇಲ್ಲದೆ ಆಡಳಿತ ಮಾಡಿದ್ದಾರೆ ಎಂದು ತಳಿಸಿದರು.

ಹಿಂದಿನ ಸರ್ಕಾರದಲ್ಲಿ 100 ರೂಪಾಯಿ ಜನರಿಗೆ ಬಿಡುಗಡೆ ಆದರೆ ಫಲಾನುಭವಿಗೆ ಕೇವಲ 15 ರೂಪಾಯಿ ತಲುಪತ್ತಿತ್ತು. ಅಷ್ಟೊಂದು ಹಗರಣ ನಡೆಯುತ್ತಿತ್ತು. ಆದರೆ ಮೊದಿಯವರು ಆಡಳಿತ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ, ಭ್ರಷ್ಟಾಚಾರ ಕೊನೆಗಾಣಿಸಿದರು. ಕೃಷಿ ಸಮ್ಮಾನ್ ಯೋಜನೆ ಅಡಿ ವರ್ಷಕ್ಕೆ 6 ಸಾವಿರ ರೂ. ನೇರವಾಗಿ ರೈತರ ಖಾತೆಗೆ ಬರುತ್ತಿದೆ. ಇದರಲ್ಲಿ ಒಂದೆ ಒಂದು ರೂ. ಸೋರಿಕೆ ಆಗುವುದಿಲ್ಲ. ಜನಧನ ಖಾತೆ ಮೂಲಕ ಬಡ ವ್ಯಕ್ತಿ ಕೂಡಾ ಉಚಿತವಾಗಿ ಖಾತೆ ತೆರೆಯಲು ಅವಕಾಶ ನೀಡದ್ದು ಮೋದಿಯವರು. ದೇಶದಲ್ಲಿ ಸದಾ ಕಾಲ ಶಾಂತಿಯುತ ವಾತಾವರಣ ನಿರ್ಮಾಣವಾಗಿರಲು ಮೋದಿಯವರ ಆಡಳಿತ ಮುಖ್ಯವಾಗಿದೆ. ಹೀಗಾಗಿ ಮೇ 7 ರಂದು ಕಮಲ ಚಿಹ್ನೆಗೆ ಮತ ನೀಡುವ ಮೂಲಕ ಗೆಲ್ಲಿಸಬೇಕು ಎಂದು ಜಗದೀಶ್ ಶೆಟ್ಟರ್ ಅವರು ಮನವಿ ಮಾಡಿದರು.

ಬಳಿಕ ಮಾತನಾಡಿದ ಮಾಜಿ ರಾಜ್ಯಸಭಾ ಸದಸ್ಯ ಪ್ರಭಾಕರ ಕೋರೆ ಅವರು, ದೇಶದ ರಕ್ಷಣಾ ವಲಯದಲ್ಲಿ ಸದ್ಯದ ಉತ್ಪಾದನೆ 70% ಇದೆ. ಬುಲೆಟ್ ಪ್ರೂಫ್, ಲೈವ್ ಜಾಕೆಟ್ ಗಳು ಕೂಡಾ ದೇಶದಲ್ಲಿಯೇ ಉತ್ಪಾದನೆ ಮಾಡಲಾಗುತ್ತಿದೆ. ಈ ಹಿಂದೆ ನಮ್ಮ ನಾಯಕರು ಸರಿ ಇರಲಿಲ್ಲ. ಅವರಿಗೆ ಆಮದು ಮಾಡಿಕೊಳ್ಳುವುದು ಅಷ್ಟೇ ಗೊತ್ತಿತ್ತು. ಈ ಹಿಂದೆ ಸೋರ್ಸ್ ಇದ್ದರು ನಮಗೆ ಉತ್ಪಾದನೆ ಮಾಡಲು ಆಗಿಲ್ಲ. ಕ್ರೂಡ್ ಆಯಿಲ್ ನಾವು 100% ಆಮದು ಮಾಡಿಕೊಳ್ಳುತ್ತೇವೆ. ನಮ್ಮಲ್ಲಿ ಸಕ್ಕರೆ ಉತ್ಪಾದನೆ ಆರಂಭ ಆಗಿ 100 ವರ್ಷ ಆಯ್ತು, ನಮ್ಮ ಜಿಲ್ಲೆಯಲ್ಲಿ 28 ಸಕ್ಕರೆ ಕಾರ್ಖಾನೆಗಳಿವೆ. ಸಕ್ಕರೆ ಬೈ ಪ್ರೋಡೆಕ್ಟ್ ಎಥೆನಾಲ್. ನಾನು ನ್ಯಾಷನಲ್ ಶುಗರ್ ಫೆಡ್ರೆಶನ್ ಉಪಾಧ್ಯಕ್ಷ ಇದ್ದೆ, ಇಥೇನಾಲ್ ಉತ್ಪಾದನೆಗೆ ನಾವು 25 ವರ್ಷ ಹೋರಾಟ ಮಾಡಿದ್ದೇವೆ. 10% ಎಥೆನಾಲ್ ಪೆಟ್ರೋಲ್ ನಲ್ಲಿ ಸೇರಿಸಬಹುದು. ಆದರೆ ಈ ಹಿಂದೆ ಇದಕ್ಕೆ ಅನುಮತಿ ಸಿಗಲಿಲ್ಲ. ಆದರೆ ಮೋದಿಯವರು ಪ್ರಧಾನಿ ಆದ ಬಳಿಲ ಸಕ್ಕರೆ ಉದ್ಯಮದಲ್ಲಿ ಎಥೆನಾಲ್ ಉತ್ಪಾದನೆಗೆ ಉತ್ತೇಜನ ನೀಡಿದರು. ಎಥೆನಾಲ್ ಉತ್ಪಾದನೆಗೆ ಎಲ್ಲಾ ಸಕ್ಕರೆ ಕಾರ್ಖಾನೆಗೆ ಪರವಾನಿಗೆ ಮೋದಿಯವರು ನೀಡಿದರು. ಪೆಟ್ರೋಲಿಯಂ ನಲ್ಲಿ ಇಥಾನಲ್ 10% ದಿಂದ 20% ಸೇರಿಸಬಹುದಾದ ಶಕ್ತಿ ನಮ್ಮಲ್ಲಿ ಬಂದಿದೆ ಎಂದರು.

ಕೇಂದ್ರ ಸಚಿವ ನೀತಿನ್ ಗಡ್ಕರಿ ಅವರು ಹೇಳಿದಂತೆ ಇಥಾನಾಲ್ ನ 100 ಪೆಟ್ರೋಲ್ ಬಂಕ್ಸ್ ಆರಂಭ ಆಗಲಿದೆ. ಮೋದಿಯವರು ಆಡಳಿತದಲ್ಲಿ ಕರ್ನಾಟಕದಲ್ಲಿಯೇ ಅತೀ ಬಡವರು 2.5 ಕೋಟಿ ಜನ ಮಧ್ಯಮ ವರ್ಗಕ್ಕೆ ಬಂದಿದ್ದಾರೆ. ದೇಶದಲ್ಲೇ 16 ಕೋಟಿ ಜನ ಮಧ್ಯಮ ವರ್ಗಕ್ಕೆ ಬಂದಿದ್ದಾರೆ. ಹಾಗಾಗಿ ಮತ್ತೊಮ್ಮೆ ದೇಶದಲ್ಲಿ ಮೋದಿ ಸರ್ಕಾರ ಯಾಕೆ ಬೇಕು ಎಂದು ನಾವೆಲ್ಲರೂ ಅರ್ಥ ಮಾಡಿಕೊಳ್ಳಬೇಕು. ಮೋದಿಯವರ ಕಾರ್ಯಕ್ರಮ ಮನೆ ಮನೆಗೆ ಮುಟ್ಟಬೇಕು. ಹೆಚ್ಚಿನ ಮತ ಜಗದೀಶ್ ಶೆಟ್ಟರ್ ಅವರಿಗೆ ನೀಡಿ ಗೆಲ್ಲಿಸಬೇಕು. ಜಗದೀಶ್ ಶೆಟ್ಟರ್ ಅವರು ತುಂಬಾ ನುರಿತ ವ್ಯಕ್ತಿ ಅವರು ಲೋಕಸಭೆಗೆ ಹೊದರೆ ಬೆಳಗಾವಿ ಜನರಿಗೆ ಅನೂಕುಲ ಆಗಲಿದೆ ಎಂದು ಹೇಳಿದರು. ಈ ವೇಳೆ ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ್, ಶೇಷಾದ್ರಿ ಕಾಲೇಜಿನ ಪ್ರಾಂಶುಪಾಲ ಎಸ್ ಎ ಪಾಟೀಲ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಬಿಜೆಪಿ ಅಧಿಕಾರಕ್ಕೆ ಬಂದರೆ ದೇಶ ಸೂಪರ್ ಪಾವರ್ ಆಗಲಿದೆ: ಜಗದೀಶ್ ಶೆಟ್ಟರ್



ಬೆಳಗಾವಿ: ಲೋಕಸಭಾ ಚುನಾವಣೆ ಎಂದರೆ ಇಡೀ ದೇಶದ ಭವಿಷ್ಯವನ್ನು ರೂಪಿಸುವ ಚುನಾವಣೆ. ಹಾಗಾಗಿ ಭಾರತ ದೇಶವನ್ನು ಸೂಪರ್ ಪಾವರ್ ದೇಶ ಮಾಡಲು ಬಿಜೆಪಿಗೆ ಮತ ನೀಡಬೇಕು ಎಂದು ಬಿಜೆಪಿ ಅಭ್ಯರ್ಥಿ ಜಗದೀಶ್ ಶೇಟ್ಟರ್ ಅವರು ಕರೆ ನೀಡಿದರು.

ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿ ದಕ್ಷಿಣ ಮತಕ್ಷೇತ್ರದ ಶಾಹಾಪುರದಲ್ಲಿ ಪ್ರಚಾರ ಸಭೆ ನಡೆಸಿ, ಮತಯಾಚನೆ ಮಾಡಲಾಯಿತು. ಈ ವೇಳೆ ಮಾತನಾಡಿದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ನಾನು ನಾಮಪತ್ರ ಸಲ್ಲಿಕೆ ಮಾಡುವ ದಿನ ಜನ ಬಂದಿದನ್ನು ನೋಡಿದರೆ ಜನ ಮತ್ತೊಮ್ಮೆ ಬಿಜೆಪಿ ಅಧಿಕಾರಕ್ಕೆ ಬರಬೇಕು ಎಂದು ತೀರ್ಮಾನ ಮಾಡಿದ್ದಾರೆ. ದೇಶದ ಅಭಿವೃದ್ಧಿ, ದೇಶದ ಭದ್ರತೆಯನ್ನು ನೋಡಿಕೊಂಡರು ಮತ ನೀಡಬೇಕು. ಲೋಕಸಭಾ ಚುನಾವಣೆ ಎಂದರೆ ಇಡೀ ದೇಶದ ಭವಿಷ್ಯ ರೂಪಿಸುವ ಚುನಾವಣೆ ಆಗಿದೆ. ನರೇಂದ್ರ ಮೋದಿಯವರು ತಮ್ಮ ಆಡಳಿತ 10 ವರ್ಷದಲ್ಲಿ ಉತ್ತಮ ಸರ್ಕಾರ ನಡೆಸಿದ್ದಾರೆ. ಕಳೆದ 10 ವರ್ಷದಲ್ಲಿ ಅಭಿವೃದ್ಧಿಯಲ್ಲಿ 14 ನೇ ಸ್ಥಾನದಲ್ಲಿ ಇದ್ದ ಭಾರತ 5 ಸ್ಥಾನಕ್ಕೆ ಬಂದಿದೆ. ಮುಂದಿನ 10-15 ವರ್ಷದಲ್ಲಿ ಇಡೀ ಜಗತ್ತಿನಲ್ಲಿ ಮೋದಿಯವರ ಆಡಳಿತದಲ್ಲಿ ಸೂಪರ್ ಪಾವರ್ ದೇಶ ಆಗಲಿದೆ ಎಂದರು.

ಶಾಸಕ ಅಭಯ ಪಾಟಿಲ್ ಅವರು ಮಾತನಾಡಿ, ಜಗದೀಶ ಶೆಟ್ಟರ್ ಅವರು ಸಿಎಂ ಆಗಿ, ಸಚಿವರಾಗಿ, ವಿಧಾನ ಸಭೆ ಅಧ್ಯಕ್ಷರಾಗಿ ಕೆಲಸ ಮಾಡಿದವರು, ಅವರು ಲೋಕಸಭೆಗೆ ಆಯ್ಕೆ ಆದರೆ ಬೆಳಗಾವಿ ಸಾಕಷ್ಟು ಅಭಿವೃದ್ಧಿ ಆಗಲಿದೆ. ಹಾಗಾಗಿ ಬಿಜೆಪಿಗೆ ಮತ ನೀಡಬೇಕು ಎಂದು ತಿಳಿಸಿದರು.

ಈ ವೇಳೆ ಪಾಲಿಕೆ ಸದಸ್ಯರಾದ ಗಿರೀಶ್ ದೊಂಗಡಿ, ಪ್ರಮುಖರಾದ ಚಂದ್ರಶೇಖರ ಬೆಂಬಳಗಿ, ಬಾಬಣ್ಣ ಕಿತ್ತೂರು ಹಾಗೂ ದಾನಮ್ಮದೇವಿ ಬಳಗದ ಮಹಿಳೆಯರು ಉಪಸ್ಥಿತರಿದ್ದರು.

# ಉದ್ಯಮಿ ನಾಗರಾಜ ಮೆಣಸಗಿ ಅವರ ಮನೆಗೆ ಬಸವರಾಜ ಬೊಮ್ಮಾಯಿ ಭೇಟಿ



ಗದಗ : ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರು ಮುದ್ರಣ ಉದ್ಯಮಿ, ಹಾಲುಮತ ಸಮಾಜ ಪ್ರಮುಖರಾದ ನಾಗರಾಜ ಮೆಣಸಗಿ ಅವರ ಮನೆಗೆ ಬೇಟಿ ನೀಡಿದ ಸಂದರ್ಭದಲ್ಲಿ ಕುಟುಂಬದ ಸದಸ್ಯರು ಬಸವರಾಜ ಬೊಮ್ಮಾಯಿ ಅವರಿಗೆ ಕಂಬಳಿ ಹೊದಿಸಿ ಸನ್ಮಾನಿಸಿದರು. ನಂತರ ಮಾತನಾಡಿದ ಅವರು ಪಕ್ಷದ ಸಂಘಟನೆಗೆ ಹಾಗೂ ಪಕ್ಷದ ಪರವಾಗಿ ಪ್ರಚಾರ ಕಾರ್ಯಗಳಲ್ಲಿ ಭಾಗವಹಿಸಲು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಎಂ.ಎಂ. ಹಿರೇಮಠ, ರವಿ ಓಬಾಜಿ, ಶೇಖಪ್ಪ ಮೆಣಸಗಿ, ಯಂಕಪ್ಪ ಹೆಬಸೂರ, ರಾಜು ಜಕ್ಕನಗೌಡ್ರ, ಸುರೇಶ ಹೆಬಸೂರ, ಗಂಗಾಧರ ಮೇಲಗಿರಿ, ಯಲ್ಲಪ್ಪ ಹೆಬಸೂರ, ಸುರೇಶ ಮರಳಪ್ಪನವರ, ಹನಮಂತಪ್ಪ ಹೆಬಸೂರ, ಮಂಜು ಕುಮಾರಕೊಪ್ಪ, ಆನಂದ ಎಲಿಗಾರ ಸೇರಿದಂತೆ ಮುಂತಾದವರು ಇದ್ದರು.

# ಅಂಚೆ ಮತ ಕೇಂದ್ರ ಸ್ಥಾಪನೆ

ಗದಗ ಏಪ್ರಿಲ್ -: ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಕ್ಕೆ ಸಂಬಂಧಿಸಿದಂತೆ ಅಗತ್ಯ ಸೇವೆಗಳ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಗೈರು ಮತದಾರರ (ಎವಿಇಎಸ್) ವರ್ಗದ ಮತದಾರರಿಗೆ ಸ್ಥಾಪಿಸಲಾದ ಅಂಚೆ ಮತ ಕೇಂದ್ರ (ಪಿವಿಸಿ) ಗಳನ್ನು ಸ್ಥಾಪಿಸಲು ಚುನಾವಣಾ ಆಯೋಗದಿಂದ ನಿರ್ದೇಶನ ನೀಡಿದೆ.

ಅದರಂತೆ ಹಾವೇರಿ ?ಗದಗ-10 ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ರ ಸಂಬಂಧ 66-ಗದಗ ಜಿಲ್ಲೆಗೆ ಸಂಬಂಧಿಸಿದಂತೆ ಅಗತ್ಯ ಸೇವೆಗಳ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಅಂಚೆ ಮತಪತ್ರದ ಸೌಲಭ್ಯಗಳನ್ನು ಒದಗಿಸಬೇಕಿದೆ.

ಈ ಮತದಾರರಿಗೆ ಅನುಕೂಲವಾಗುವಂತೆ ಅಂಚೆ ಮತ ಕೇಂದ್ರವನ್ನು ಜಿಲ್ಲಾಧಿಕಾರಿಗಳ ಹಾಗೂ ಚುನಾವಣಾಧಿಕಾರಿಗಳ ಕಚೇರಿ 10- ಹಾವೇರಿ ಲೋಕಸಭಾ ಕ್ಷೇತ್ರ , ಹಾವೇರಿ ಇಲ್ಲಿ ಸ್ಥಾಪಿಸಲಾಗಿದ್ದು, ಅಗತ್ಯ ಸೇವೆಗಳಡಿ ಕೆಲಸ ನಿರ್ವಹಿಸುತ್ತಿರುವ ಮತದಾರರು ಮೇ 1 , 2 ಮತ್ತು 3 ರಂದು (ಎವಿಇಎಸ್) ವರ್ಗದ ಮತದಾರರು ಈ ಸ್ಥಳದಲ್ಲಿ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿರುವುದರಿಂದ ಎಲ್ಲಾ (ಎವಿಇಎಸ್) ಮತದಾರರು ಮತ ಚಲಾಯಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ. ಈ ಸ್ಥಳದಲ್ಲಿ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿರುವುದರಿಂದ ಎಲ್ಲಾ (ಎವಿಇಎಸ್) ಮತದಾರರು ಮತ ಚಲಾಯಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮತದಾನ ನ್ಯಾಯಬದ್ಧ ಹಕ್ಕು, ತಪ್ಪದೇ ಚಲಾಯಿಸಿ: ಸಿಡಿಪಿಓ ನಾಗರಾಜ

ಬಳ್ಳಾರಿ,ಏ.-: ಮತ ಚಲಾವಣೆ ಮಾಡುವುದು ಸಂವಿಧಾನದ ನ್ಯಾಯಬದ್ಧ ಹಕ್ಕು ಆಗಿದ್ದು, ಪ್ರತಿಯೊಬ್ಬರೂ ಮೇ 07 ರಂದು ತಪ್ಪದೇ ಮತ ಚಲಾವಣೆ ಮಾಡಿ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ನಾಗರಾಜ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಗುರುವಾರ ನಗರದ ವಿಮ್ಸ್ ವೃತ್ತದಿಂದ ಇಂದಿರಾ ನಗರದವರೆಗೆ ಮತದಾನ ಜಾಗೃತಿ ಅಂಗವಾಗಿ ಹಮ್ಮಿಕೊಂಡಿದ್ದ ಮತದಾನ ಜಾಥಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಾರ್ವಜನಿಕರು ಯಾವುದೇ ಆಮೀಷಕ್ಕೆ ಒಳಗಾಗದೆ ಮತದಾನ ಮಾಡಿ, ಸದೃಢ ದೇಶ ನಿರ್ಮಾಣಕ್ಕೆ ತಕ್ಕ ನಾಯಕರನ್ನು ನೀವೇ ಆಯ್ದುಕೊಳ್ಳಿ ಎಂದರು.

ಈ ವೇಳೆ ನಾನು ಹೆಮ್ಮೆಯ ಮತದಾರ, ತಪ್ಪದೇ ಮತ ಚಲಾಯಿಸುವೆ ಎನ್ನುವ ಸೆಲ್ಫಿ ಬೂತ್ ತೆರೆಯಲಾಗಿತ್ತು.

ಜಾಥಾದುದ್ದಕ್ಕೂ ಮಹಿಳೆಯರು, ಆಶಾ-ಕಾರ್ಯಕರ್ತೆಯರು ವಿವಿಧ ಘೋಷಣೆ ಕೂಗುತ್ತಾ ನಾಮಫಲಕ ಹಿಡಿದು ಸಾಗಿದರು. ಜಾಥಾದುದ್ದಕ್ಕೂ ಮಹಿಳೆಯರು, ಆಶಾ-ಕಾರ್ಯಕರ್ತೆಯರು ವಿವಿಧ ಘೋಷಣೆ ಕೂಗುತ್ತಾ ನಾಮಫಲಕ ಹಿಡಿದು ಸಾಗಿದರು.

ಈ ಸಂಧರ್ಭದಲ್ಲಿ ಆಶಾ ಕಾರ್ಯಕರ್ತೆಯರು ಸೇರಿದಂತೆ ಮಹಿಳೆಯರು, ಸಾರ್ವಜನಕರು ಉಪಸ್ಥಿತರಿದ್ದರು.

# ಬಿಜೆಪಿ ಭ್ರಷ್ಟಾಚಾರ ರಹಿತ ಆಡಳಿತ ನೀಡಿದ ಪಕ್ಷ-ದೊಡ್ಡನಗೌಡ ಪಾಟೀಲ್



ಕೊಪ್ಪಳ: ಬಿಜೆಪಿ ಭ್ರಷ್ಟಾಚಾರ ರಹಿತ ಆಡಳಿತ ನೀಡಿದ ಏಕೈಕ ಪಕ್ಷವಾಗಿದೆ. ಅಭಿವೃದ್ಧಿ ಆಡಳಿತ ನೀಡಿದ ಮೋದಿ ಸರ್ಕಾರಕ್ಕೆ ಮತ್ತೊಮ್ಮೆ ಅವಕಾಶ ನೀಡಿ ಎಂದು ವಿಧಾನಸಭೆ ವಿರೋಧ ಪಕ್ಷದ ಮುಖ್ಯಸಚೇತಕ ದೊಡ್ಡನಗೌಡ ಪಾಟೀಲ್ ಅವರು ಮತದಾರರಲ್ಲಿ ಮನವಿ ಮಾಡಿಕೊಂಡರು.

ವಿಧಾನಸಭಾ ಕ್ಷೇತ್ರದ ದೋಟಿಹಾಳದ ಮಹಾಶಕ್ತಿ ಕೇಂದ್ರದ ಚುನಾವಣಾ ಬಹಿರಂಗ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಧ್ಯವರ್ತಿಗಳ ಹಾವಳಿ ಇಲ್ಲದೇ ನೇರವಾಗಿ ಫಲಾನುಭವಿಗಳ ಖಾತೆಗೆ ಯೋಜನೆಯ ಹಣ ರವಾನೆಯಾಗುವಂತೆ ಮಾಡಿದ ಕೀರ್ತಿ ನರೇಂದ್ರ ಮೋದಿ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಸೇರುತ್ತದೆ ಎಂದರು.

ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕೆ. ಶರಣಪ್ಪ ಮಾತನಾಡಿ, ಭಾರತದ ರಕ್ಷಣಾ ಕ್ಷೇತ್ರದಲ್ಲಿ ಅನೇಕ ಸುಧಾರಣೆಗಳು, ಬದಲಾವಣೆ ಆಗಿವೆ. ಇತ್ತೀಚಿಗೆ ಸ್ವದೇಶಿ ಬುಲೆಟ್ ಪ್ರೂಫ್ ಜಾಕೆಟ್ ಉದಾಹರಣೆ ಕೂಡಾ ಒಂದು. ಆತ್ಮನಿರ್ಭರ ಭಾರತ ಎಂಬ ಘೋಷಣೆ ಕೇವಲ ಮಾತಾಗಿ ಉಳಿಯದೆ ಇಂದು ಕಾರ್ಯರೂಪದಲ್ಲಿ ಅನುಷ್ಠಾನಗೊಳಿಸಲಾಗಿದೆ. ಇದು ಹೆಮ್ಮೆಯ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕಾರ್ಯವೈಖರಿಗೆ ಹಿಡಿದ ಕೈಗನ್ನಡಿ. ಮತ್ತೊಮ್ಮೆ ನಮ್ಮ ದೇಶ ಸುಭದ್ರವಾಗಿ ಮುನ್ನಡೆಯಲು ಬಿಜೆಪಿ ಪಕ್ಷಕ್ಕೆ ಮತ ಹಾಕಿ ಎಂದರು.

ಈ ಸಂದರ್ಭದಲ್ಲಿ ಕುಷ್ಟಗಿ ಬಿಜೆಪಿ ಮಂಡಲ ಅಧ್ಯಕ್ಷ ಮಹಾಂತೇಶ್ ಬಾದಾಮಿ, ಮುಖಂಡರಾದ ಅಶೋಕ್ ಬಳೂಟಗಿ, ಫಕೀರಪ್ಪ ಚಳಗೇರಿ, ಗುರುಮೂರ್ತಿ ಸ್ವಾಮಿ, ಶಂಕರಗೌಡ ಜಾಲಿಹಾಳ, ವಿಜಯಕುಮಾರ್ ಹಿರೇಮಠ, ಲಾಡಸಾಬ್ ಕೊಳ್ಳಿ, ಚೆನ್ನಪ್ಪ ಕಡಿವಾಳ, ಬಾಲಾಜಿ, ಕ್ಯಾದಿಕಪ್ಪ ಹೆಸರೂರು, ಚನ್ನಪ್ಪ, ಶೇಖರಗೌಡ, ಶಿವನಗೌಡ ಪಾಟೀಲ್, ಬಿನ್ನನಗೌಡ, ಸಿದ್ದನಗೌಡ, ಕಾಳೇಶ ಬಡಿಗೇರ, ದೇವಪ್ಪ ಬಾಗೇವಾಡಿ ಸೇರಿದಂತೆ ಉಭಯ ಪಕ್ಷದ ಪ್ರಮುಖರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಬಿಜೆಪಿ ಅಭ್ಯರ್ಥಿಯಿಂದ ಬೈಕ್ ರ್‍ಯಾಲಿ*

ದೋಟಿಹಾಳ ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕೆ.ಶರಣಪ್ಪ ಅವರಿಗೆ ಅದ್ದೂರಿ ಸ್ವಾಗತ ದೊರೆಯಿತು. ಬಿಜೆಪಿ ಕಾರ್ಯಕರ್ತರು ನೂರಾರು ಬೈಕ್ ಗಳಲ್ಲಿ ರ್‍ಯಾಲಿ ನಡೆಸಿದರು.ರ್‍ಯಾಲಿಯುದ್ಧಕ್ಕೂ ದೇಶದ ಭದ್ರತೆಗೆ ಬಿಜೆಪಿಗೆ ಮತ ನೀಡಿ ಎಂದು ಘೋಷಣೆ ಕೂಗಿದರು.

# ಕರ್ನಾಟಕ ಪತ್ರಕರ್ತರ ಸಂಘ"ತಾಲೂಕು ಘಟಕ ಪ್ರಾರಂಭ



ಕೊಟ್ಟೂರು ಏ.26 : ಕೊಟ್ಟೂರು ತಾಲೂಕು ಕರ್ನಾಟಕ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ಕೊರವರ ಕೊಟ್ರೇಶ ಅವಿರೋಧವಾಗಿ ಆಯ್ಕೆಗೊಂಡರು. ಇಲ್ಲಿನ ಪ್ರವಾಸಿ ಮಂದಿರದಲ್ಲಿ ಜಿಲ್ಲಾಧ್ಯಕ್ಷ ಬಿ. ಎಚ್.ಎಸ್.ರಾಜು ,ನೇತೃತ್ವದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಿತು.

ತಾಲೂಕು ಕರ್ನಾಟಕ ಪತ್ರಕರ್ತರ ಸಂಘದ ಕಾರ್ಯಾಧ್ಯಕ್ಷ ಹೆಚ್. ವಿಜಯ್ ಕುಮಾರ್, ಉಪಾಧ್ಯಕ್ಷರಾಗಿ ಶಿರಿಬಿ ಕೊಟ್ರೇಶ್ ಮತ್ತು ಎಂ. ಶ್ರೀನಿವಾಸ್ ,ಪ್ರಧಾನ ಕಾರ್ಯದರ್ಶಿಯಾಗಿ ಡಿ. ಸಿದ್ದಪ್ಪ ,ಖಜಾಂಚಿ ಯಾಗಿ ತೆಗ್ಗಿನಕೇರಿ ಕೊಟ್ರೇಶ್, ಸಂಘಟನಾ ಕಾರ್ಯದರ್ಶಿಯಾಗಿ ಎಸ್. ಪ್ರಕಾಶ್, ಜಂಟಿ ಸಂಘಟನಾ ಕಾರ್ಯದರ್ಶಿಯಾಗಿ ಜಿ. ಶಿವರಾಜ್ ಕನ್ನಡಿಗ, ಅವಿರೋಧವಾಗಿ ಆಯ್ಕೆಯಾದರು.ಜಿಲ್ಲಾ ಸಂಘದ ಕಾರ್ಯಾಧ್ಯಕ್ಷ ಸೋಮಶೇಖರಯ್ಯ ಹಿರೇಮಠ್, ಪ್ರಧಾನ ಕಾರ್ಯದರ್ಶಿ ಕಾಕುಬಾಳು ಪ್ರಕಾಶ್,ಎಂ.ಗೌಸ್ ಇವರ ಸಮ್ಮುಖದಲ್ಲಿ ಮತ್ತು ತಾಲೂಕು ಸದಸ್ಯರು ಹಿರಿಯ ಪತ್ರಕರ್ತರ ಕೆ.ಎಂ. ಚಂದ್ರಶೇಖರ, ಎಸ್.ಪರಶುರಾಮ್, ಕೋರವರ ಕೊಟ್ರೇಶ, ಸುವೇಭ್ ವಲಿ ಕೆ.ವೈ. ಹರ್ಷವರ್ಧನ , ಎಚ್. ದಾದಪೀರ್, ಪೂಜಾರ್ ಗಣೇಶ್ , ಮತ್ತಿತರರು ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.

# ವೋಟ್ ಮಾಡಲು ಲಂಡನ್‌ನಿಂದ ಮಂಡ್ಯಕ್ಕೆ ಬಂದ ಯುವತಿ

ಪ್ರಜಾಪ್ರಭುತ್ವದ ಹಬ್ಬ (ಫೆಸ್ಟಿವಲ್ ಆಫ್ ಡೆಮಾಕ್ರಸಿ) ಎಂದೇ ಹೇಳಲಾಗುವ ಲೋಕಸಭೆ ಚುನಾವಣೆಯಲ್ಲಿ ಮತ ಚಲಾಯಿಸುವ ಮೂಲಕ ಜನರು ಈ ಹಬ್ಬದ (ಸೆಲೆಬ್ರೆಶನ್‌ನಲ್ಲಿ) ಆಚರಣೆಯಲ್ಲಿ ಸಂಭ್ರಮದಿಂದ ತಮ್ಮನ್ನು ತೊಡಗಿಸಿಕೊಂಡಿದ್ದು, ರಾಜ್ಯದಲ್ಲಿ ಮೊದಲ ಹಂತದ ಮತದಾನ ಪ್ರಕ್ರಿಯೆ ನಡೆದು, ಸಿನಿಮಾ, ರಾಜಕೀಯ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಮತಗಟ್ಟೆಗೆ ಆಗಮಿಸಿ ಮತ ಚಲಾವಣೆ ಮಾಡಿದ್ದಾರೆ. ಇದರಲ್ಲಿ ಯುವಜನರು ಅತ್ಯುತ್ಸಾಹದಿಂದ ತೊಡಗಿಸಿಕೊಂಡಿದ್ದು ವಿಶೇಷ ಸಂಗತಿಯಾಗಿದೆ.

ಈ ಪೈಕಿ ತಮ್ಮ ಮತ ಚಲಾಯಿಸಲು ಯುವತಿಯೊಬ್ಬರು ಇಂಗ್ಲೆಂಡ್‌ನ ರಾಜಧಾನಿ ಲಂಡನ್‌ನಿಂದ ಮಂಡ್ಯಕ್ಕೆ ಬಂದು ಹಕ್ಕು ಚಲಾಯಿಸುವ ಮೂಲಕ ಪ್ರಜಾಪ್ರಭುತ್ವದ ಹಿರಿಮೆಯನ್ನು ಎತ್ತಿ ಹಿಡಿದಿದ್ದಾಳೆ. ಅಲ್ಲದೇ ತನ್ನ ಹಕ್ಕಿನ ಮಹತ್ವ ಅರಿತಿರುವ ಈ ಯುವತಿಯು ಇತರರಿಗೂ ಅದರಲ್ಲೂ ವಿಶೇಷವಾಗಿ ಯುವಜನರಿಗೆ ಮಾದರಿಯಾಗಿದ್ದಾರೆ.

ಸಕ್ಕರೆ ನಾಡು ಮಂಡ್ಯ ತಾಲೂಕಿನ ಕಾಳೇನಹಳ್ಳಿ ಗ್ರಾಮದ ಸೋನಿಕಾ ಅವರು ಲಂಡನ್‌ನಲ್ಲಿ ಸಾಫ್ಟ್‌ವೇರ್ ಉದ್ಯೋಗಿಯಾಗಿದ್ದಾರೆ. ಭಾರತದಲ್ಲಿ ಅದರಲ್ಲೂ ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ವೋಟ್ ಮಾಡಲೆಂದು ಬರೋಬ್ಬರಿ ಒಂದೂವರೆ ಲಕ್ಷ ರೂಪಾಯಿಗಳನ್ನು ಖರ್ಚು ಮಾಡಿಕೊಂಡು ತವರಿಗೆ ಬಂದು ಮತದಾನ ಮಾಡಿದ್ದಾರೆ. ಹೀಗೆ ಮತ ಚಲಾಯಿಸುವ ಮೂಲಕ ಅವರು ತಮ್ಮ ಕರ್ತವ್ಯವನ್ನು ಮೆರೆದಿದ್ದಾರೆ. ಎಲ್ಲರ ಮೆಚ್ಚುಗೆಗೂ ಪಾತ್ರರಾಗಿದ್ದಾರೆ.

ಇದೇ ವೇಳೆ ಮಾತನಾಡಿದ ಸೋನಿಕಾ ಅವರು "ನಾನು ಲಂಡನ್‌ನಿಂದ ವೋಟ್ ಮಾಡಲೆಂದು ಬಂದಿದ್ದೇನೆ. ನಮ್ಮ ಅಣ್ಣ ಎಲೆಕ್ಷನ್ ಎಷ್ಟೊಂದು ಇಂಪಾರ್ಟೆಂಟ್ ಎಂದು ಹೇಳಿದರು. ಈಗಾಗಲೇ ಬರಗಾಲ ಇದೆ. ಜನರಿಗೆ ಒಳ್ಳೆಯದು ಆಗಬೇಕೆಂದು ನಾನು ಅಲ್ಲಿಂದ ಬಂದು ಮತ ಹಾಕಿದ್ದೇನೆ. ಒಳ್ಳೆಯ ವ್ಯಕ್ತಿಯನ್ನು ಆಯ್ಕೆ ಮಾಡುವ ಮೂಲಕ ನಮ್ಮ ಹಕ್ಕು ಕೇಳಬಹುದು. ಜನರು ಕೂಡ ಎಲ್ಲರೂ ಬಂದು ವೋಟ್ ಹಾಕಬೇಕು. ಇದರಿಂದ ನಮ್ಮ ದೇಶ, ರಾಜ್ಯದ ಅಭಿವೃದ್ಧಿಗೆ ಸಹಕಾರಿ ಆಗುತ್ತದೆ.

ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಅವರಿಗೆ ವೋಟ್ ಮಾಡಿದ್ದೇನೆ. ಅವರು ಕೇಂದ್ರ ಸಚಿವರಾದರೆ ನಮಗೆಲ್ಲ ಒಳ್ಳೆಯದು ಆಗುತ್ತದೆ. ಮೋದಿ ಮತ್ತೊಮ್ಮೆ ಅಧಿಕಾರಕ್ಕೆ ಬಂದರೆ ದೇಶಕ್ಕೆ ಇನ್ನು ಒಳ್ಳೆಯದು. ರಾಷ್ಟ್ರೀಯ ಭದ್ರತೆ ಬಹಳ ಹೆಚ್ಚುತ್ತದೆ. ನಮ್ಮ ಮಂಡ್ಯ ಜನಕ್ಕೆ ಒಳ್ಳೆಯದು ಆದರೆ ಸಾಕು ಎಂದು ಒಂದೂವರೆ ಲಕ್ಷ ರೂಪಾಯಿಗಳನ್ನು ಖರ್ಚು ಮಾಡಿಕೊಂಡು ಬಂದು ಮತ ಹಾಕಿದ್ದೇನೆ. ಎಲ್ಲರೂ ಬಂದು ವೋಟ್ ಹಾಕಿ. ನಮ್ಮ ಮತ, ನಮ್ಮ ಹಕ್ಕು" ಎಂದು ತಿಳಿಸಿದ್ದಾರೆ. ಇಂತಹವರ ಸಂಖ್ಯೆ ಇನ್ನಷ್ಟು ಹೆಚ್ಚಲಿ, ಇವರನ್ನು ನೋಡಿ ಇತರರೂ ಕಲಿಯಲಿ, ಪ್ರಜಾಪ್ರಭುತ್ವ ಗೆಲ್ಲಲ್ಲಿ ಎಂದು ಹಲವರು ಆಶಿಸಿದ್ದಾರೆ.

ಇನ್ನೊಂದೆಡೆ ನ್ಯಾಷನಲ್ ಸ್ಟಾರ್ ಆಗಿ ಬೆಳೆಯುತ್ತಿರುವ ಯೂಥ್ ಐಕಾನ್ ರಾಕಿಂಗ್ ಸ್ಟಾರ್ ಯಶ್ ಅವರು ಬೆಂಗಳೂರಿನ ಹೊಸಕೆರೆಹಳ್ಳಿಯ ಸರ್ಕಾರಿ ಹಿರಿಯ ಪ್ರೌಢ ಶಾಲೆಯಲ್ಲಿ ತಮ್ಮ ಹಕ್ಕು ಚಲಾಯಿಸಿದ್ದಾರೆ. ತಮ್ಮ ಬ್ಯುಸಿ ಕೆಲಸಗಳ ಮಧ್ಯೆಯೂ ಮತ ಚಲಾಯಿಸುವ ಮೂಲಕ ಅವರು ತಮ್ಮ ಕರ್ತವ್ಯವನ್ನು ಮೆರೆದಿದ್ದಾರೆ. ಇತರರಿಗೂ ಮಾದರಿಯಾಗಿದ್ದಾರೆ. ಅಲ್ಲದೇ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಮತದಾನ ಮಾಡಬೇಕು ಎಂದು ಅವರು ಕರೆ ನೀಡಿದ್ದಾರೆ.

ಹೊಸಕೆರೆಹಳ್ಳಿಯ ಸರ್ಕಾರಿ ಹಿರಿಯ ಪ್ರೌಢ ಶಾಲೆಯಲ್ಲಿ ತಮ್ಮ ಹಕ್ಕು ಚಲಾಯಿಸುವುದಕ್ಕೂ ಮೊದಲು ಯಶ್ ಅವರು ಅಭಿಮಾನಿಗಳನ್ನು ಭೇಟಿ ಮಾಡಿದರು. ನಂತರವೇ ಮತಗಟ್ಟೆಗೆ ಆಗಮಿಸಿ ದೇಶದ ಅಭಿವೃದ್ಧಿಯನ್ನು ಮನಸ್ಸಲ್ಲಿಟ್ಟುಕೊಂಡು ತಮ್ಮ ಅಮೂಲ್ಯವಾದ ಮತ ಹಾಕಿದ್ದಾರೆ. ಇದೇ ವೇಳೆ ಮಾತನಾಡಿದ ರಾಕಿಂಗ್ ಸ್ಟಾರ್ ಯಶ್ ಅವರು, ವೋಟ್ ಮಾಡಲು ಯಾವುದೇ ಸ್ಫೂರ್ತಿ ಅಂತ ಏನು ಇಲ್ಲ. ಎಲ್ರೂ ಬಂದು ವೋಟ್ ಮಾಡಲೇಬೇಕಷ್ಟೇ. ನಮ್ಮ ಹಕ್ಕನ್ನು ನಾವು ಚಲಾಯಿಸುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ವೋಟಿಂಗ್ ಬಂದಾಗ ನಮ್ಮ ನಿರ್ಧಾರ ನಾವು ತೆಗೆದುಕೊಳ್ಳಬೇಕು. ಆಗ ನಾವೆಲ್ಲ ಪ್ರಬುದ್ಧರು ಆಗುತ್ತೇವೆ ಎಂದು ತಿಳಿಸಿದ್ದಾರೆ.

ದೇಶದ ಎಲ್ಲ ಜನರ ಅಭಿಪ್ರಾಯಕ್ಕೂ ಪ್ರಜಾಪ್ರಭುತ್ವದಲ್ಲಿ ಬೆಲೆ ಇರಬೇಕು. ಕೆಲವೊಮ್ಮೆ ಸ್ವಲ್ಪ ಜನ ವೋಟ್ ಮಾಡಿದ್ರೆ ಇನ್ನುಳಿದವರ ಅಭಿಪ್ರಾಯ ಏನೆಂಬುದು ಗೊತ್ತಾಗುವುದಿಲ್ಲ. ಎಲ್ಲರೂ ಮತ ಹಾಕಿದಷ್ಟು ಒಳ್ಳೆಯದು. ಶೇಕಡವಾರು ಮತದಾನದಲ್ಲಿ ಕಡಿಮೆ ಆಗಲ್ಲ. ಯುವಕರು ಕೊನೆ ಕೊನೆಯಲ್ಲಿ ಬಂದು ಮತದಾನ ಮಾಡ್ತಾರೆ. ದಿನದ ಕೊನೆಯಲ್ಲಿ ರಿಸಲ್ಟ್ ಹೆಚ್ಚಾಗಬಹುದು.

ಸರ್ಕಾರ ಮಾಡೋ ಕೆಲಸ ಅಚ್ಚುಕಟ್ಟಾಗಿ ಮಾಡಬೇಕು. ಜನರು ಮಾಡೋ ಕೆಲಸವನ್ನು ಜನರಿಗೆ ಮಾಡೋಕೆ ಬಿಡಬೇಕು. ವಿಶ್ವದಲ್ಲಿ ಭಾರತ ಒಳ್ಳೆಯ ಸ್ಥಾನದಲ್ಲಿದೆ. ಇದನ್ನು ಉಪಯೋಗಿಸಿಕೊಂಡು ನಾವೆಲ್ಲ ಮುಂದಕ್ಕೆ ಹೋಗಬೇಕು. ದೇಶಕ್ಕೆ ಈಗ ಒಳ್ಳೆಯ ಅವಕಾಶ, ಸಮಯವಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಸೋ, ಎಲ್ಲ ಯುವಜನರು ತಪ್ಪದೇ ವೋಟ್ ಮಾಡಿ, ಆ ಮೂಲಕ ಪ್ರಜಾಪ್ರಭುತ್ವವನ್ನು ಗೆಲ್ಲಿಸಬೇಕು. ಏಕೆಂದರೆ ದೇಶ ನಿರ್ಮಾಣ ಕಾರ್ಯದಲ್ಲಿ ಯುವಜನರ ಪಾತ್ರ ಬಹಳ ಹಿರಿದು. ಇದನ್ನು ಎಂದಿಗೂ ಮರೆಯದಿರಿ. ಜೈ ಯಂಗ್ ಇಂಡಿಯಾ..

– ಮಂಜುನಾಥ.ಎಸ್. ಕಟ್ಟಿಮನಿ